**ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ**
"ಸಾರಿಗೆ ಭವನ" ಕೇಂದ್ರ ಕಛೇರಿ,
ಕೆ.ಹೆಚ್.ರಸ್ತೆ, ಶಾಂತಿನಗರ, ಬೆಂಗಳೂರು–560 027. ಭಾರತ
ದೂರವಾಣಿ : 080-22221321 / 22221325
ವೆಬ್–ಸೈಟ್ : www.ksrtc.karnataka.gov.in

**Karnataka State Road Transport Corporation**
"Transport House" Central Offices,
K.H.Road, Shanthinagar, Bangalore-560 027. India
Tel : 080-22221321 / 25
Website : www.ksrtc.karnataka.gov.in

ಸಂಖ್ಯೆ:ಕರಾಸಾ/ಕೇಕ/ನೇಮಕ/ಸಿ-2/ 710 /2023-24 ದಿನಾಂಕ: 27-02-2024

**<u>ಪತ್ರಿಕಾ ಪ್ರಕಟಣೆ</u>**

ವಿಷಯ: ಕರಾರಸಾ ನಿಗಮದಲ್ಲಿ ಚಾಲಕ-ಕಂ-ನಿರ್ವಾಹಕ ಹುದ್ದೆಗಳ ನೇಮಕಾತಿ ಕುರಿತು.

*****

ಕರಾರಸಾ ನಿಗಮದಲ್ಲಿ ಜಾಹೀರಾತು ಸಂ.1/2020 ದಿನಾಂಕ: 14-02-2020 ರನ್ವಯ ಚಾಲಕ-ಕಂ-ನಿರ್ವಾಹಕ ಹುದ್ದೆಗಳ ನೇರ ನೇಮಕಾತಿಗಾಗಿ ಹೊರಡಿಸಲಾಗಿದ್ದ ಅಧಿಸೂಚನೆಯಲ್ಲಿನ ಹುದ್ದೆಗಳ ಸಂಖ್ಯೆಯನ್ನು ಸರ್ಕಾರದ ಆದೇಶದಂತೆ 2000 ಕ್ಕೆ ಸೀಮಿತಗೊಳಿಸಿ ಭರ್ತಿ ಮಾಡಿಕೊಳ್ಳಲು ಕ್ರಮ ವಹಿಸಲಾಗುತ್ತಿದೆ. ಅದರಂತೆ ಅಧಿಸೂಚನೆ ಸಂದರ್ಭದಲ್ಲಿ ಚಾಲ್ತಿಯಲ್ಲಿದ್ದ ಮೀಸಲಾತಿ ನಿಯಮಗಳನ್ವಯ ವರ್ಗವಾರು ಹುದ್ದೆಗಳ ಸಂಖ್ಯೆಯನ್ನು ಪರಿಷ್ಕರಿಸಿ ನಿಗಮದ ಅಧಿಕೃತ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ.

ಮುಂದುವರೆದು, ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳಿಗೆ ದಿನಾಂಕ: 06-03-2024 ರಿಂದ ದಾಖಲಾತಿ/ದೇಹದಾರ್ಢ್ಯತೆ ಪರಿಶೀಲನೆ ನಡೆಸಲು ನಿರ್ಧರಿಸಲಾಗಿದ್ದು, ಈ ಸಂಬಂಧ ಅಭ್ಯರ್ಥಿಗಳು ದಿನಾಂಕ: 03-03-2024 ರಿಂದ ನಿಗಮದ ಅಧಿಕೃತ ವೆಬ್‌ಸೈಟ್ <u>ksrtcjobs.karnataka.gov.in</u> ರಲ್ಲಿ ಕರೆಪತ್ರವನ್ನು ಡೌನ್‌ಲೋಡ್ ಮಾಡಿಕೊಂಡು ಎಲ್ಲಾ ಮೂಲ ದಾಖಲಾತಿಗಳೊಂದಿಗೆ ನಿಗದಿತ ದಿನಾಂಕ ಹಾಗೂ ಸಮಯಕ್ಕೆ ಹಾಜರಾಗಲು ಈ ಮೂಲಕ ಸೂಚಿಸಲಾಗಿದೆ.

**ವಿಶೇಷ ಸೂಚನೆ: ಪ್ರಸ್ತುತ ಅಭ್ಯರ್ಥಿಗಳ ಮೂಲ ದಾಖಲಾತಿ / ದೇಹದಾರ್ಢ್ಯತೆ ಪರಿಶೀಲನೆ ಮಾತ್ರ ನಡೆಸಲಾಗುತ್ತಿದೆ. ಅರ್ಹರಾದ ಅಭ್ಯರ್ಥಿಗಳಿಗೆ ಚಾಲನಾ ವೃತ್ತಿ ಪರೀಕ್ಷೆ ನಡೆಸುವ ಕುರಿತು ಪ್ರತ್ಯೇಕ ದಿನಾಂಕ / ಸ್ಥಳವನ್ನು ನಿಗಧಿಪಡಿಸಲಾಗುವುದು. ಸದರಿ ಹುದ್ದೆಯ ಆಯ್ಕೆಯು ಗಣಕೀಕೃತ ಚಾಲನಾ ವೃತ್ತಿ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಮೆರಿಟ್ ಹಾಗೂ ಅಧಿಸೂಚನೆ ಸಂದರ್ಭದಲ್ಲಿ ಚಾಲ್ತಿಯಲ್ಲಿದ್ದ ಮೀಸಲಾತಿ ನಿಯಮಗಳಿಗೆ ಅನುಗುಣವಾಗಿ ಪಾರದರ್ಶಕವಾಗಿ ನಡೆಯುವುದರಿಂದ ಮಾನವ ಹಸ್ತಕ್ಷೇಪ ಇರುವುದಿಲ್ಲ. ಆದುದರಿಂದ ಅಭ್ಯರ್ಥಿಗಳು ಯಾವುದೇ ಶಿಫಾರಸ್ಸು, ಮಧ್ಯವರ್ತಿಗಳ ಅಮಿಷಗಳಿಗೆ ಒಳಗಾಗಬಾರದೆಂದು ಸ್ಪಷ್ಟಪಡಿಸಿದೆ.**

**ನಿರ್ದೇಶಕರು (ಸಿ & ಜಾ) ಹಾಗೂ**
**ಅಧ್ಯಕ್ಷರು, ಆಯ್ಕೆ ಸಮಿತಿ**